ದಿನಾಂಕಃ**11-07-2025** ರಂದು ಸಾಕ್ಷಿಯನ್ನು ಪುನಃ ಕರೆಸಿ ಪ್ರಮಾಣವಚನ ಮಾಡಿಸಲಾಯಿತು.

ಮಧ್ಯಂತರ ಅರ್ಜಿಯ ಆದೇಶದ ಮೇರೆಗೆ ಮುಂದುವರೆದ ಮುಖ್ಯ ವಿಚಾರಣೆ ಮಾಡಲು ಅನುಮತಿ ನೀಡಲಾಯಿತು.

ಮುಂದುವರಿದ ಮುಖ್ಯವಿಚಾರಣೆಃ ಅರ್ಜಿದಾರರ ಪರ ಶ್ರೀ ಬಿ ಸಿ ವಿ ಎಸ್ ವಕೀಲರಿಂದಃ

ನಾನು ಈ ದಿನ ಡಿಸ್ಚಾರ್ಜ್ ಸಮ್ಮರಿ ಪ್ರತಿ ಹಾಜರುಪಡಿಸಿದ್ದು ಅದನ್ನು ನಿಪಿ- 179 ಎಂದು, 44 ಔಷದಿ ಮತ್ತು ವೈಧ್ಯಕೀಯ ಬಿಲ್ಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ - 180 ರಿಂದ 223 ಎಂದು, ಒಂದು ಔಷದಿ ಚೀಟಿ ಹಾಜರುಪಡಿಸಿದ್ದು ಅದನ್ನು ನಿಪಿ- 224 ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ **3** ನೇ ಎದುರುದಾರರ ಪರ ಎನ್ ಡಿ ಕೆ ಪರವಾಗಿ ಶ್ರೀಮತಿ ಎನ್ ಎಸ್ ಎನ್ ವಕೀಲರಿಂದಃ

ನನಗೆ ಅಪಘಾತದಿಂದ ಯಾವುದೇ ತೀವ್ರ ಸ್ವರುಪದ ಗಾಯಗಳು ಉಂಟಾಗಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಹರ್ಷ ಲಕ್ಷ್ಮೀ ಆಸ್ಪತ್ರೆಯಲ್ಲಿ ಯಾವುದೇ ಚಿಕಿತ್ಸೆಯನ್ನು ಪಡೆದುಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ನಾನು ನಿಪಿ- 180 ರಿಂದ 223 ದಾಖಲೆಗಳನ್ನು ಹೆಚ್ಚಿನ ಪರಿಹಾರ ಪಡೆಯುವ ಸಲುವಾಗಿ ಸೃಷ್ಟಿ ಮಾಡಿ ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು ಯಾವುದೇ ಶಾಶ್ವತ ಅಂಗ ನ್ಯೂನ್ಯತೆ ಉಂಟಾಗಿರುವುದಿಲ್ಲ ಹಾಗೂ ನಾನು ಮೊದಲಿನಂತೆ ಈಗಲೂ ಸಹ ಕೆಲಸ ಮಾಡುತ್ತಾ ಇರುತ್ತೇನೆ ಎಂದರೆ ಸರಿಯಲ್ಲ ಸಾಕ್ಷಿ ಮುಂದುವರೆದು ನನಗೆ ನಡೆಯಲು ಆಗದೇ ವೀಲ್ ಚೇರ್ ನಲ್ಲಿ ಇರುತ್ತೇನೆ ಎಂದು ಉತ್ತರಿಸುತ್ತಾರೆ. ನನಗೆ ಮುಂದುವರೆದ ಚಿಕಿತ್ಸೆಯ ಅವಶ್ಯಕತೆ ಇರುವುದಿಲ್ಲ ಎಂದರೆ ಸರಿಯಲ್ಲ ಸಾಕ್ಷಿ ಮುಂದುವರೆದು ನನಗೆ ಮುಂದೆ ಚಿಕಿತ್ಸೆ ಆಗಬೇಕು ಎಂದು ವೈಧ್ಯರು ಹೇಳಿದ್ದಾರೆ ಎಂದು ಉತ್ತರಿಸುತ್ತಾರೆ. ನಾನು ಈ ದಿನ ದಾಖಲಾತಿಗಳನ್ನು ಸೃಷ್ಟಿ ಮಾಡಿಕೊಂಡು ಬಂದು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲಃ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಗಿದೆ.)

ಓ ಹೇ ಕೇ ಸ ಇ ಎ ಓ

Sd/-xxx
ಹಿರಿಯ ಸಿವಿಲ್ ನ್ಯಾಯಾಧೀಶರುಃ ನ.ರಾ.ಪುರ,
ಸಂಚಾರಿ ನ್ಯಾಯಾಲಯ, ಕೊಪ್ಪ.

ಸಾಕ್ಷಿದಾರರ ಸಹಿಃ